# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಜಗನ್ನಾಥ ಮಜಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ ಸ್ಥಳ ನಿಯುಕ್ತಿ ನೀಡುವ ಬಗ್ಗೆ - ಆದೇಶ

**ಓದಲಾಗಿದೆ:-**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 140 ಜಿಪಅ 2021 ದಿನಾಂಕ: 10.11.2021
2) ಕಲಬುರಗಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ: 21019/2021ರಲ್ಲಿ ನೀಡಿರುವ ಆದೇಶ ದಿನಾಂಕ: 07.01.2022
3) ಕಲಬುರಗಿ ಪೀಠದ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ರಿಟ್ ಅರ್ಜಿ ಸಂಖ್ಯೆ: 200149/2022 ರಲ್ಲಿ ನೀಡಿರುವ ಮಧ್ಯಂತರ ಆದೇಶ ದಿನಾಂಕ: 24.02.2022

*****

**ಪ್ರಸ್ತಾವನೆ:**

ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಕಲಬುರಗಿ ಪೀಠವು ನಿಂದನಾ ಅರ್ಜಿ ಸಂಖ್ಯೆ: 200124/2021 (CIVIL) ರಲ್ಲಿ ದಿನಾಂಕ: 21.10.2021 ರಂದು ನೀಡಿದ ಆದೇಶದ ಅನುಸಾರ ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ದಿನಾಂಕ: 10.11.2021ರ ಅಧಿಸೂಚನೆಯಲ್ಲಿ ಶ್ರೀ ಜಗನ್ನಾಥ ಮಜಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಯೋಜನಾ ಉಪ ವಿಭಾಗ, ಬಸವಕಲ್ಯಾಣ ಇಲ್ಲಿನ ಶ್ರೀ ಎಂ.ಎಸ್. ಸ್ವಪ್ನಿಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಸ್ಥಳಕ್ಕೆ ಹಾಗೂ ಶ್ರೀ ಎಂ.ಎಸ್.ಸ್ವಪ್ನಿಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಜೇವರ್ಗಿ ಇಲ್ಲಿ ಖಾಲಿ ಇದ್ದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲಾಗಿತ್ತು.

ಸರ್ಕಾರದ ದಿನಾಂಕ: 10.11.2021ರ ವರ್ಗಾವಣೆ ಆದೇಶವನ್ನು ಪ್ರಶ್ನಿಸಿ ಶ್ರೀ ಎಂ.ಎಸ್.ಸ್ವಪ್ನಿಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಕಲಬುರಗಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಸಲ್ಲಿಸಿದ್ದ ಅರ್ಜಿ ಸಂಖ್ಯೆ: 21019/2021 ಗೆ ಸಂಬಂಧಪಟ್ಟಂತೆ ಮಾನ್ಯ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 07.01.2022 ರಂದು ಕೆಳಕಂಡಂತೆ ಆದೇಶಿಸಿರುತ್ತದೆ:-

## ORDER

"....... 14. The contention of the learned counsel for the 3rd Respondent that after the impugned order being passed the 3rd Respondent took charge at Basavakalyan on 12.11.2021 and its only on the strength of status-quo order being passed by this Tribunal on 17.11.2021 applicant took charge on 19.11.2021 cannot be accepted for the reason that its based on the transfer order having been passed by the 1st Respondent on 24.08.2021, applicant took charge on 27.08.2021 by following due procedure as prescribed under Rule 12 of Karnataka Civil Services Rules from the predecessor. When that being the status, the question of 3rd Respondent taking charge on 12.11.2021 without following the said procedure does not arise at all.

15. In view of the discussion made above, I am of the considered opinion that the applicant has made out a case for interference. Accordingly, the application is allowed and the impugned order bearing No. ಗ್ರಾಅಪ 140 ಜಿಪಅ 2021 ದಿನಾಂಕ: 10.11.2021 passed by the 1st Respondent (Annexure-A6) is hereby quashed.

ಮೇಲ್ಕಂಡ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಆದೇಶದ ವಿರುದ್ಧ ಶ್ರೀ ಜಗನ್ನಾಥ ಮಜಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಕಲಬುರಗಿ ಪೀಠದ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 200149/2022 ಸಲ್ಲಿಸಿರುತ್ತಾರೆ. ಸದರಿ ರಿಟ್ ಅರ್ಜಿಯ ಕುರಿತು ಮಾನ್ಯ ಉಚ್ಚ ನ್ಯಾಯಾಲಯವು ಮೇಲೆ ಕ್ರಮ ಸಂಖ್ಯೆ: (3)ರಲ್ಲಿ ಓದಲಾದ ದಿನಾಂಕ: 24.02.2022 ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಮೊದಲನೇ ಪ್ರತಿವಾದಿಯಾದ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರಿಗೆ ಈ ಹಿಂದಿನ ವ್ಯಾಜ್ಯಾದ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಅರ್ಜಿದಾರರಾದ ಶ್ರೀ ಜಗನ್ನಾಥ ಮಜಗೆ ಇವರಿಗೆ ಒಂದು ಸ್ಥಳನಿಯುಕ್ತಿ ನೀಡಲು ಸೂಚನೆ ನೀಡಿರುತ್ತದೆ.

ಸರ್ಕಾರವು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ಅರ್ಜಿ ಸಂಖ್ಯೆ: 21019/2021 ದಿನಾಂಕ: 07.01.2022 ರಂದು ನೀಡಿರುವ ಆದೇಶ ಹಾಗೂ ಕಲಬುರಗಿ ಪೀಠದ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 200149/2022 ದಿನಾಂಕ: 24.02.2022 ರಂದು ನೀಡಿರವ ಮಧ್ಯಂತರ ಆದೇಶವನ್ನು ಪರಿಶೀಲಿಸಿದೆ. ಮಾನ್ಯ ಆಡಳಿತ ನ್ಯಾಯ ಮಂಡಳಿಯು ಸರ್ಕಾರದ ದಿನಾಂಕ: 10.11.2021ರ ಆದೇಶವನ್ನು ರದ್ದುಪಡಿಸಿದ ಕಾರಣ ಶ್ರೀ ಎಂ.ಎಸ್.ಸ್ವಪ್ನಿಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಯೋಜನಾ ಉಪ ವಿಭಾಗ, ಬಸವಕಲ್ಯಾಣ ಇಲ್ಲಿಯೇ ಮುಂದುವರೆದಿದ್ದಾರೆ. ಹಾಗಾಗಿ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಅನುಸಾರ ಶ್ರೀ ಜಗನ್ನಾಥ ಮಜಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ಬೇರೆ ಹುದ್ದೆಗೆ ನೇಮಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ: ಗ್ರಾಅಪ 140 ಜಿಪಅ 2021 ಬೆಂಗಳೂರು, ದಿನಾಂಕ: 08.03.2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಗನ್ನಾಥ ಮಜಗೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಔರಾದ್ ಇಲ್ಲಿ ಶ್ರೀ ಅಶೋಕ ಸಜ್ಜನ ಶೆಟ್ಟಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಮುಂಬಡ್ತಿಯಿಂದ ತೆರವಾದ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

8/3

(ಕೆ.ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ / ಕಲಬುರಗಿ
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5. ಸರ್ಕಾರಿ ವಕೀಲರು, ಕರ್ನಾಟಕ ಉಚ್ಚ ನ್ಯಾಯಾಲಯ, ಕಲಬುರಗಿ ಪೀಠ, ಕಲಬುರಗಿ - ರಿಟ್ ಅರ್ಜಿ ಸಂಖ್ಯೆ: 200149/2022 ಗೆ ಸಂಬಂಧಪಟ್ಟಂತೆ
6. ಸರ್ಕಾರಿ ವಕೀಲರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕಲಬುರಗಿ ಪೀಠ, ಕಲಬರುಗಿ - ಅರ್ಜಿ ಸಂಖ್ಯೆ: 21019/20021ಗೆ ಸಂಬಂಧಪಟ್ಟಂತೆ
7. ಸಂಬಂಧಪಟ್ಟ ಅಧಿಕಾರಿಗಳಿಗೆ
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
9. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
10. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.